# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮೂಡಲಗಿ.

ಸಿ.ಸಿ. ನಂಃ 767/2023

ಸಿ.ಡಬ್ಲ್ಯೂ- 3
ಪಿ.ಡಬ್ಲ್ಯೂ- 1

**ದಿನಾಂಕಃ 14-08-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿದಾರರ ಹೆಸರು | : ಮಿಟ್ಟುಸಾಬ ಮುಲ್ತಾನಿ |
| ತಂದೆಯ/ಗಂಡನ ಹೆಸರು | : ಬಾಬುಲಾಲ |
| ವಯಸ್ಸು | : 60 ವರ್ಷ |
| ಉದ್ಯೋಗ | : ಖಾಸಗಿ ವ್ಯಾಪಾರ |
| ವಾಸ ಸ್ಥಳ | : ಅರಭಾವಿ |
| ತಾಲೂಕು | : ಮೂಡಲಗಿ |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದ:-**

ಸಾಕ್ಷಿಗೆ ಎರಡು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರ ಮೇಲಿರುವ ತಮ್ಮ ಹೆಬ್ಬೆಟ್ಟಿನ ಗುರುತುಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳನ್ನು ನಿಪಿ-1 ಮತ್ತು 2 ಎಂದು ಗುರುತಿಸಲಾಯಿತು.

ಸುಮಾರು 8 ವರ್ಷಗಳ ಹಿಂದೆ ಅರಭಾವಿ ಮಠದ ಹತ್ತಿರ ಸದರಿ ದಾಖಲೆಗಳಿಗೆ ನನ್ನ ಸಹಿಯನ್ನು ಮಾಡಿರುತ್ತೇನೆ. ಯಾವ ವಿಚಾರಕ್ಕೆ ನನ್ನ ಸಹಿ ಮಾಡಿದ್ದೇನೆಂದು ನನಗೆ ತಿಳಿದಿಲ್ಲ. ಮಹಜರ್ ನಲ್ಲಿರುವ ಸಂಗತಿಗಳು ನನಗೆ ತಿಳಿದಿರುವುದಿಲ್ಲ. ನನ್ನ ಮುಂದೆ ಪೊಲೀಸರು ಯಾವುದೇ ವಾಹನಗಳನ್ನು ಮತ್ತು ನೋಡಿದರೆ ಗುರುತಿಸಲಾಗುವುದಿಲ್ಲ. ಸಾಕ್ಷಿಯು ಭಾವಚಿತ್ರದಲ್ಲಿ ತಮ್ಮ ಇರುವಿಕೆಯನ್ನು ಗುರುತಿಸಿದ್ದು, ಸದರಿ ಭಾವ ಚಿತ್ರವನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ಭಾವಚಿತ್ರವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆಂದು ನನಗೆ ತಿಳಿದಿರುವುದಿಲ್ಲ.

**(ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಸಾಕ್ಷಿಯು ನ್ಯಾಯಾಲಯದಲ್ಲಿ ನೀಡಿದ ಹೇಳಿಕೆ ಮತ್ತು ಪೊಲೀಸರ ಮುಂದೆ ನೀಡಿದ ಹೇಳಿಕೆಯನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಅನುಮತಿಯನ್ನು ನೀಡಲಾಯಿತು)**

**ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ ಅವರಿಂದಃ**

ದಿನಾಂಕಃ 02-05-2018 ರಂದು ರಾತ್ರಿ 8-30 ರ ಸಮಯದಲ್ಲಿ ಸಂಗನಕೇರಿ ಅರಭಾವಿ ರಸ್ತೆಯಲ್ಲಿ ಆರೋಪಿ ಚಾಲಕನು ದ್ವಿಚಕ್ರ ವಾಹನ ನಂ. KA 49 W 0558 ನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಸಂಗನಕೇರಿಯಿಂದ ಅರಭಾವಿ ಕಡೆಗೆ ಚಾಲನೆ ಮಾಡಿ ರಸ್ತೆ ಬದಿ ನಡೆದುಕೊಂಡು ಹೋಗುತ್ತಿದ್ದ ಹೀರಮಾ ಮಲಿಕ್‌ಸಾಬ ರನ್ನಮಲ್ಲೆ ಎಂಬ ಮಹಿಳೆಗೆ ಹಿಂದಿನಿಂದ ಅಪಘಾತಪಡಿಸಿದ

ವಿಚಾರವಾಗಿ ತನಿಖಾಧಿಕಾರಿ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಚಾಸಾ 6 ರವರು ತೋರಿಸಿದ ಸ್ಥಳದಲ್ಲಿ ದಿಃ 03.05.2018 ರಂದು ಮಧ್ಯಾಹ್ನ 2 ರಿಂದ 3 ರವರೆಗೆ ಸ್ಥಳ ಪಂಚನಾಮೆ ಮಾಡಿ, ಕಚ್ಚಾ ನಕ್ಷೆ ತಯಾರಿಸಿ, ಭಾವಚಿತ್ರ ತೆಗೆದು ಸ್ಥಳದಲ್ಲಿ ನನ್ನ ಮತ್ತು ಚಾಸಾ2 ರವರ ಸಹಿ ತೆಗೆದುಕೊಂಡಿರುತ್ತಾರೆಂದರೆ ಸರಿಯಲ್ಲ. ಅಲ್ಲದೇ ತನಿಖಾಧಿಕಾರಿ ಸ್ಥಳದಲ್ಲಿ ಅಪಘಾತಪಡಿಸಿದ ದ್ವಿಚಕ್ರ ವಾಹನವನ್ನು ಅಮಾನತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ನಿಪಿ-3 ಭಾವಚಿತ್ರವನ್ನು ತೆಗೆದುಕೊಂಡಿರುತ್ತಾರೆಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ಹಾಜರಿದ್ದು, ಪಂಚನಾಮೆ ವಿಚಾರಗಳನ್ನು ತಿಳಿದುಕೊಂಡು ಸಹಿ ಮಾಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರುವಿಚಾರಣೆಃ ಇರುವುದಿಲ್ಲ.**

ಗಣಕೀಕರಿಸಿ ಓದಿ ಹೇಳಿ ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.

ಪ್ರ. ದ. ನ್ಯಾ. ದಂ.,
ಮೂಡಲಗಿ.